ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

No:ED/KEA/PH-SCRIBE/2024

Date:08/02/2024

ದಿನಾಂಕ: 18-02-2024 ರಂದು ನಡೆಯುವ
ಯು.ಪಿ.ಎಸ್.ಸಿ/ಕೆ.ಎ.ಎಸ್/ಎಸ್.ಎಸ್.ಸಿ/ಆರ್.ಆರ್.ಬಿ/ಬ್ಯಾಂಕಿಂಗ್/ಗ್ರೂಪ್-ಸಿ ಉಚಿತ ತರಬೇತಿ ಪ್ರವೇಶ ಪರೀಕ್ಷೆಯ ವಸ್ತ್ರಸಂಹಿತೆ

ಪುರುಷ ಅಭ್ಯರ್ಥಿಗಳ ವಸ್ತ್ರ ಸಂಹಿತೆ:

- ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಶರ್ಟ್‌ಗಳನ್ನು ಅನುಮತಿಸಲಾಗುವುದಿಲ್ಲವಾದ್ದರಿಂದ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್‌ಗಳನ್ನು ಧರಿಸುವುದನ್ನು ಖಚಿತಪಡಿಸಿಕೊಳ್ಳಬೇಕು. ಸಾದ್ಯವಾದಷ್ಟು ಕಾಲರ್‌ರಹಿತ ಶರ್ಟ್ ಧರಿಸಲು ಆದ್ಯತೆ ನೀಡುವುದು.
- ಪ್ಯಾಂಟ್ ಮತ್ತು ಸರಳ ಪ್ಯಾಂಟ್ (ಜೇಬುಗಳು ಇಲ್ಲದಿರುವ / ಕಮ್ಮಿ ಜೇಬುಗಳಿರುವ) ಪುರುಷ ಅಭ್ಯರ್ಥಿಗಳಿಗೆ ಆದ್ಯತೆಯ ಡ್ರೆಸ್ ಕೋಡ್ ಆಗಿದೆ. ಕುರ್ತಾ ಪೈಜಾಮನ್ನು, ಜೀನ್ಸ್ ಪ್ಯಾಂಟ್ ಅನುಮತಿಸುವುದಿಲ್ಲ
- ಪುರುಷ ಅಭ್ಯರ್ಥಿಗಳು ಧರಿಸುವ ಬಟ್ಟೆಗಳು ಹಗುರವಾಗಿರಬೇಕು ಅಂದರೆ ಜಿಪ್ ಪಾಕೆಟ್‌ಗಳು, ಪಾಕೆಟ್‌ಗಳು, ದೊಡ್ಡ ಬಟನ್‌ಗಳು ಮತ್ತು ವಿಸ್ತಾರವಾದ ಕಸೂತಿ ಇರುವ ಬಟ್ಟೆಗಳು ಇರಬಾರದು.
- ಪರೀಕ್ಷಾ ಹಾಲ್ ಒಳಗೆ ಶೂಗಳನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಸ್ಯಾಂಡಲ್ ಅಥವಾ ತೆಳುವಾದ ಅಡಿಭಾಗ ಇರುವ ಚಪ್ಪಲಿಗಳನ್ನು ಧರಿಸುವುದು ಸೂಕ್ತ.
- ಅಭ್ಯರ್ಥಿಗಳು ಕುತ್ತಿಗೆಯ ಸುತ್ತ ಯಾವುದೇ ಲೋಹದ ಆಭರಣಗಳನ್ನು ಧರಿಸುವುದು ಅಥವಾ ಕಿವಿಯೋಲೆಗಳು, ಉಂಗುರಗಳು ಮತ್ತು ಕಡಗಗಳನ್ನು ಧರಿಸುವುದು ನಿಷೇಧಿಸಲಾಗಿದೆ.

ಮಹಿಳಾ ಅಭ್ಯರ್ಥಿಗಳ ವಸ್ತ್ರ ಸಂಹಿತೆ

- ಮಹಿಳಾ ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚ್‌ಗಳು ಅಥವಾ ಬಟನ್‌ಗಳು ಹೊಂದಿರುವ ಬಟ್ಟೆಗಳನ್ನು ಧರಿಸುವುದು ನಿಷೇಧಿಸಲಾಗಿದೆ.
- ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಬಟ್ಟೆಗಳನ್ನು / ಜೀನ್ಸ್ ಪ್ಯಾಂಟ್ ಧರಿಸಬಾರದು, ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಅವರಿಗೆ ಮುಜುಗರವಾಗದಂತೆ ಮತ್ತು ನಾವು ಉಲ್ಲೇಖಿಸಿರುವ ನಿಯಮದಂತೆ ಧರಿಸುವಂತೆ ನಿರ್ದೇಶಿಸಲಾಗಿದೆ.

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in

- ಎತ್ತರವಾದ ಹಿಮ್ಮಡಿಯ ಶೂಗಳನ್ನು/ ಚಪ್ಪಲಿಗಳನ್ನು ಮತ್ತು ದಪ್ಪವಾದ ಅಡಿ ಭಾಗ ಹೊಂದಿರುವ ಶೂಗಳನ್ನಾಗಲಿ/ ಚಪ್ಪಲಿಗಳನ್ನಾಗಲಿ ಧರಿಸಬಾರದು, ತೆಳುವಾದ ಅಡಿಭಾಗ ಹೊಂದಿರುವ ಚಪ್ಪಲಿಗಳು ಧರಿಸುವುದು ಕಡ್ಡಾಯವಾಗಿದೆ.
- ಮಹಿಳಾ ಅಭ್ಯರ್ಥಿಗಳು ಯಾವುದೇ ರೀತಿಯ ಲೋಹದ ಆಭರಣಗಳನ್ನು ಧರಿಸುವುದನ್ನು ನಿಷೇಧಿಸಿದೆ. (ಮಂಗಳಸೂತ್ರ ಮತ್ತು ಕಾಲುಂಗುರ ಹೂರತುಪಡಿಸಿ).

<u>ನಿಷೇಧಿತ ವಸ್ತುಗಳ ಪಟ್ಟಿ</u>

- ಡ್ರೆಸ್ ಕೋಡ್ ಅನ್ನು ಅನುಸರಿಸುವುದರ ಜೊತೆಗೆ, ಕೆಳಗೆ ಪಟ್ಟಿ ಮಾಡಲಾದ ಪರೀಕ್ಷಾ ಕೇಂದ್ರಕ್ಕೆ ಯಾವುದೇ ನಿಷೇಧಿತ ವಸ್ತುಗಳನ್ನು ತೆಗೆದುಕೊಂಡು ಹೋಗದಂತೆ, ಅಭ್ಯರ್ಥಿಗಳು ಖಚಿತಪಡಿಸಿಕೊಳ್ಳಬೇಕು.
- ಎಲೆಕ್ಟ್ರಾನಿಕ್ ವಸ್ತುಗಳು, ಮೊಬೈಲ್ ಫೋನ್‌ಗಳು, ಪೆನ್ ಡ್ರೈವ್‌ಗಳು, ಇಯರ್ ಫೋನ್‌ಗಳು, ಮೈಕ್ರೋಫೋನ್‌ಗಳು, ಬ್ಲೂ ಟೂಥ್ ಸಾಧನಗಳು ಮತ್ತು ಕೈ ಗಡಿಯಾರಗಳನ್ನು ಪರೀಕ್ಷಾ ಕೊಠಡಿಯೊಳಗೆ ಅನುಮತಿಸಲಾಗುವುದಿಲ್ಲ.
- ತಿನ್ನಬಹುದಾದ ಪದಾರ್ಥಗಳನ್ನು ಪರೀಕ್ಷಾ ಕೊಠಡಿಯೊಳಗೆ ತರುವುದನ್ನು ಹಾಗು ತಿನ್ನುವುದನ್ನು ನಿಷೇಧಿಸಲಾಗಿದೆ, ಕುಡಿಯುವ ನೀರಿನ ಬಾಟಲಿಗೂ ಸಹ ಅನುಮತಿ ಇರುವುದಿಲ್ಲ.
- ಪರೀಕ್ಷಾ ಕೇಂದ್ರದಲ್ಲಿಯೇ ಕುಡಿಯುವ ನೀರಿಗೆ ವ್ಯವಸ್ತೆ ಕಲ್ಪಿಸಿಕೊಡಲಾಗುವುದು.
- ಪೆನ್ಸಿಲ್, ಪೇಪರ್, ಎರೇಸರ್, ಜಾಮಿಟ್ರಿ ಬಾಕ್ಸ್ ಗಳು ಮತ್ತು ಲಾಗ್ ಟೇಬಲ್ ಗಳನ್ನು ಪರೀಕ್ಷಾ ಕೇಂದ್ರದೊಳಗೆ ತರುವಂತಿಲ್ಲ.
- ತಲೆಯ ಮೇಲೆ ಟೋಪಿ/ HAT ಧರಿಸಿಬಾರದು.
- ಯಾವುದೇ ರೀತಿಯ ಮಾಸ್ಕ ಅನ್ನು ಧರಿಸುವಂತಿಲ್ಲ.

ಪರೀಕ್ಷೆಯ ದಿನದಂದು ಈ ಕೆಳಗಿನ ವಸ್ತುಗಳನ್ನು ಮಾತ್ರ ತರಲು ಅನುಮತಿಸಲಾಗಿದೆ.

- ಪ್ರವೇಶ ಪತ್ರವನ್ನು ಎಲ್ಲಾ ಅಭ್ಯರ್ಥಿಗಳು ಖಡ್ಡಾಯವಾಗಿ ತರುವುದು.
- ಸರ್ಕಾರದಿಂದ ಮಾನ್ಯವಾದ ಫೋಟೋ ಗುರುತಿನ ಚೀಟಿಯನ್ನು ತರುವುದು ಖಡ್ಡಾಯಗೊಳಿಸಲಾಗಿದೆ.
- ಪರೀಕ್ಷೆಯ ಕೊನೆಯ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರಗೆ ಹೋಗಲು ಅನುಮತಿ ಇರುವುದಿಲ್ಲ.

<u>ಮೇಲೆ ಹೇಳಲಾಗಿರುವ ಕೆ.ಇ.ಎ ನಿಯಮಗಳನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸತಕ್ಕದ್ದು, ಇಲ್ಲವಾದಲ್ಲಿ ನಿಯಮಾನುಸಾರ ಅಭ್ಯರ್ಥಿಗಳ ಮೇಲೆ ಕಠಿಣ ಕ್ರಮವನ್ನು ಜರುಗಿಸಲಾಗುವುದು.</u>

ಕಾರ್ಯನಿರ್ವಾಹಕ ನಿರ್ದೇಶಕರು